ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತಮೂರನೆಯ ಅಧಿವೇಶನ
ಗುರುವಾರ, ದಿನಾಂಕ: 4ನೇ ಫೆಬ್ರುವರಿ, 2021

ಕಂದಾಯ ಇಲಾಖೆಯ ಹುದ್ದೆಗಳಿಗೆ ಇತರೆ ಇಲಾಖೆಯ ಅಧಿಕಾರಿಗಳನ್ನು ನೇಮಿಸುತ್ತಿರುವ ಬಗ್ಗೆ

ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

387(404) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಂದಾಯ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸದೆ ಅನುಭವ ಮತ್ತು ತರಬೇತಿ ಇಲ್ಲದ ಸಚಿವಾಲಯದ ಬಡ್ತಿ ಪಡೆದ ನೌಕರರುಗಳನ್ನು ತಾಲ್ಲೂಕುಗಳ ತಹಶೀಲ್ದಾರ್ ಹುದ್ದೆಗೆ ನೇಮಕ ಮಾಡುತ್ತಿರುವುದು ಸರ್ಕಾರದ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ವಿರುದ್ಧವಲ್ಲವೇ; (ವಿವರ ನೀಡುವುದು)

(ಆ) ಈ ರೀತಿಯಲ್ಲಿ ಸಚಿವಾಲಯದ ಮತ್ತು ವಿಧಾನಸಭೆ/ವಿಧಾನ ಪರಿಷತ್‌ನಿಂದ ತಹಶೀಲ್ದಾರ್‌ರಾ ಗಿ ಹೋದ ಅಧಿಕಾರಿಗಳಿಂದ ಉಂಟಾಗಿರುವ ಲೋಪಗಳ ಬಗ್ಗೆ ಸರ್ಕಾರಕ್ಕೆ ಮಾಹಿತಿ ಇದೆಯೇ; (ವಿವರ ನೀಡುವುದು)

(ಇ) ಈ ರೀತಿಯಲ್ಲಿ ಸಚಿವಾಲಯದ/ಅಧಿಕಾರಿಗಳನ್ನು ನಿಯೋಜನೆ ಮೇರೆಗೆ ಬೇರೆ ಇಲಾಖೆ/ನಿಗಮ/ಮಂಡಳಿಗಳಿಗೆ ನಿಯೋಜಿಸಿದ್ದಲ್ಲಿ ಮಾತೃ ಇಲಾಖೆಯ ಸಿಬ್ಬಂದಿಗಳು ಮತ್ತು ಅಧಿಕಾರಿಗಳು ಬಡ್ತಿಯಿಂದ ವಂಚಿತರಾಗುವುದಿಲ್ಲವೇ; ಇದಕ್ಕೆ ಸರ್ಕಾರದ ಸ್ಪಷ್ಟೀಕರಣವೇನು;

(ಈ) ಈ ರೀತಿ ಬೇರೆ ಇಲಾಖೆ ನಿಗಮ/ಮಂಡಳಿಗಳಿಗೆ ನಿಯೋಜನೆ ಮೇಲೆ ಕಳುಹಿಸದಿರಲು ಸರ್ಕಾರದ ಕ್ರಮಗಳೇನು? (ವಿವರ ನೀಡುವುದು)